**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ ಉತ್ತರ ಕನ್ನಡ : ಕಾರವಾರ**

**ಸ್ಪೆಷಲ್ ಕೇಸ್ ನಂ. 3/2010**

**ದೋ.ಸಾ. :119 ಪ್ರಾ.ಸಾ. : 57**

| | |
|---|---|
| ಸಾಕ್ಷಿಯ ಹೆಸರು | : ಜರೀನಾ ಬಿ |
| ಗಂಡನ ಹೆಸರು | : ಮುಜೀಬ್ ಸಾಬ್ |
| ವಯಸ್ಸು | : 55 ವರ್ಷ |
| ಉದ್ಯೋಗ | : ಬಿಸಿಯೂಟ ಅಡಿಗೆ ಕೆಲಸ. |
| ವಾಸ | : ಕಾನಗೋಡು. |

**ದಿನಾಂಕಃ 06-12-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಿಶೇಷ ಸರಕಾರಿ ಅಭಿಯೋಜಕರಿಂದ**

1. ನಾನು ಕಾನಗೋಡು ಗ್ರಾಮದಲ್ಲಿ 35 ವರ್ಷಗಳಿಂದ ಮದುವೆ ಆದಾಗಿನಿಂದ ವಾಸ ಇದ್ದೆನೆ. ಕಾನಗೋಡದಲ್ಲಿ ನನ್ನ ಸ್ವಂತ ಮನೆ ಇದೆ. ನ್ಯಾಯಾಲಯದ ಮುಂದೆ ಇರುವ ಆರೋಪಿಯ ಪರಿಚಯ ನನಗೆ ಇದ್ದಾನೆ. ಆರೋಪಿ ಕಾನಗೋಡು ಗ್ರಾಮ ಪಂಚಾಯತಿಯ ಅಧ್ಯಕ್ಷ ಆಗಿದ್ದ. 15 ವರ್ಷದ ಹಿಂದೆ ನನ್ನ ಮನೆಯಲ್ಲಿ ಶೌಚಾಲಯ ನಿರ್ಮಿಸಿದ್ದೇವೆ. ಅದನ್ನು ನಿರ್ಮಿಸಲು ಪಂಚಾಯತಿಯಿಂದ ರೂ.1800/- ಅನ್ನು ನನಗೆ ಕೊಟ್ಟಿದ್ದರು. ರೂ.3000/- ಅನ್ನು ಕೊಟ್ಟಿರಲಿಲ್ಲ. ಸ್ವಚ್ಛ ಗ್ರಾಮ ಯೋಜನೆ ಅಡಿಯಲ್ಲಿ ನಮ್ಮ ಊರಿನಲ್ಲಿ ಶೌಚಾಲಯ ಕಟ್ಟಿಕೊಳ್ಳಲು 210 ಫಲಾನುಭವಿಗಳನ್ನು ಆಯ್ಕೆ ಮಾಡಿದ್ದು ನನಗೆ ನನಗೆ ಗೊತ್ತಿಲ್ಲ. ಆ ಬಗ್ಗೆ ರೂ.20 ಲಕ್ಷ ಅನುದಾನವನ್ನು ಸರ್ಕಾರ ನೀಡಿದ್ದು ನನಗೆ ಗೊತ್ತಿಲ್ಲ. ಶೌಚಾಲಯವನ್ನು ಪಂಚಾಯತಿಯಿಂದ ನಿರ್ಮಿಸಿ ಕೊಟ್ಟಿಲ್ಲ. ನಾವೇ ಹಣ ಹಾಕಿ ಶೌಚಾಲಯ ನಿರ್ಮಿಸಿಕೊಂಡಿರುವುದು ನನಗೆ ನೆನಪಿದೆ. ಪೊಲೀಸನವರು ನನ್ನನ್ನು ಈ ಪ್ರಕರಣದಲ್ಲಿ ವಿಚಾರಣೆ ಮಾಡಿಲ್ಲ.

**ಪಾಟೀ ಸವಾಲುಃ ಆರೋಪಿತರ ವಕೀಲರಾದ ಶ್ರೀ ಜಿ ಟಿ ಎನ್ ರವರಿಂದಃ-**

2. 2001-02 ರಲ್ಲಿ ಶೌಚಾಲಯ ನಿರ್ಮಿಸಿಕೊಳ್ಳಲು ಪಂಚಾಯತಿಯಿಂದ ರೂ.3000/- ಸಹಾಯಧನವನ್ನು ಕೊಟ್ಟಿದ್ದಾರೆ ಎಂದರೆ ಸರಿಯಲ್ಲ. ನನ್ನ ಮನೆಯಲ್ಲಿ ನಾನೇ ಯಜಮಾನಿಕೆ ಮಾಡುತ್ತೇನೆ, ನನ್ನ ಗಂಡ ಇರುವುದಿಲ್ಲ. ರೂ.1800/- ಅನ್ನು ಮಾತ್ರ ಗ್ರಾಮ ಪಂಚಾಯತಿಯವರು ಕೊಟ್ಟಿದ್ದಾರೆ ಎಂದು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ರೂ.3000/- ಅನ್ನು ಕೊಟ್ಟಿದ್ದಾರೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ– **ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ)

ಓ.ಹೇ.ಕೇ.ಸ.ಇ.

(ಡಿ.ಎಸ್. ವಿಜಯಕುಮಾರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ , ಕಾರವಾರ